ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/65/ಸಿಬ್ಬಂದಿ/ಸಿಆರ್ 7/ಕಾ.ಕೇ.ನೋ/2018-2019

ನಿರ್ದೇಶಕರ ಕಛೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ
18ನೇ ಅಡ್ಡರಸ್ತೆ, ಮಲ್ಲೇಶ್ವರಂ
ಬೆಂಗಳೂರು-560012
ದಿನಾಂಕ: 14-10-2018

## ಸುತ್ತೋಲೆ

ವಿಷಯ: ಚುನಾಯಿತ ಪ್ರತಿನಿಧಿಗಳ ಹಕ್ಕಿಗೆ ಚ್ಯುತಿ ಎಸಗದಂತೆ ಶಿಷ್ಟಾಚಾರ ಪಾಲಿಸುವ ಬಗ್ಗೆ.
ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ/10 ಡಿಜಿಡಿ 2018 ದಿನಾಂಕ:10-10-2018.

ಸರಕಾರಿ ಪದವಿ ಪೂರ್ವ ಕಾಲೇಜು, ಲಕ್ಷ್ಮೇಶ್ವರ ಜಿಲ್ಲೆ: ಗದಗ ಇಲ್ಲಿ ಪ್ರಾಚಾರ್ಯರಾಗಿ ಕೆಲಸ ನಿರ್ವಹಿಸುತ್ತಿರುವ ಶ್ರೀಮತಿ ಎಸ್.ಬಿ.ಯಲವಿಗಿ ಪಶ್ಚಿಮ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರಕಾರಿ ಪದವಿ ಪೂರ್ವ ಕಾಲೇಜು ಲಕ್ಷೇಶ್ವರ, ಜಿಲ್ಲೆ ಗದಗ ಇದರ ಕೊಠಡಿ ನಿರ್ಮಾಣ ಕಾಮಗಾರಿಯ ಭೂಮಿ ಪೂಜಾ ಸಮಾರಂಭಕ್ಕೆ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಸ್.ವಿ.ಸಂಕನೂರು ಇವರನ್ನು ಆಹ್ವಾನಿಸದೇ, ನಿರ್ಮಿತಿ ಕೇಂದ್ರದ ಅಧಿಕಾರಿಗಳು ಗದಗ ಜಿಲ್ಲೆ ಹಾಗೂ ನೀವುಗಳೂ ಸೇರಿಕೊಂಡು ಶಿಷ್ಟಾಚಾರ ಉಲ್ಲಂಘಿಸಿ, ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹಕ್ಕಿಗೆ ಚ್ಯುತಿ ಎಸಗಿರುವ ಹಲವಾರು ಪ್ರಕರಣಗಳು ಬೆಳಕಿಗೆ ಬಂದ ಹಿನ್ನಲೆಯಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಅವರು ವರದಿ ಕೋರಿರುತ್ತಾರೆ.

ಉಲ್ಲೇಖಿತ ಪತ್ರದನ್ವಯ ಸರ್ಕಾರವು ಇಂತಹ ಪ್ರಕರಣಗಳನ್ನು ಸೂಕ್ಷ್ಮ ಹಾಗೂ ಗಂಭೀರವಾಗಿ ಪರಿಗಣಿಸಿರುವ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಡಿಯಲ್ಲಿ ಬರುವ ಉಪನಿರ್ದೇಶಕರು ಮತ್ತು ಕಾಲೇಜುಗಳಿಗೆ ಇನ್ನುಮುಂದೆ ಚುನಾಯಿತ ಪ್ರತಿನಿಧಿಗಳ ಹಕ್ಕಿಗೆ ಚ್ಯುತಿ ಎಸಗದಂತೆ ಶಿಷ್ಟಾಚಾರ ಪಾಲಿಸುವಂತೆ ಮುನ್ನೆಚ್ಚರಿಕೆ ನೀಡಲಾಗಿದೆ. ಶಿಷ್ಟಾಚಾರ ಪಾಲಿಸದ ಅಧಿಕಾರಿ/ನೌಕರರನ್ನು ನೇರ ಹೊಣೆಗಾರರನ್ನಾಗಿ ಮಾಡಿ ಏಕ ಪಕ್ಷೀಯವಾಗಿ ಶಿಸ್ತು ಕ್ರಮ ಜರುಗಿಸಲಾಗುವುದು.

ಜಂಟಿ ನಿರ್ದೇಶಕರು (ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
2. ರಾಜ್ಯದ ಎಲ್ಲಾ ಉಪನಿರ್ದೇಶಕರ ಕಛೇರಿಗಳಿಗೆ
3. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿತ ಜಿಲ್ಲಾ ಉಪನಿರ್ದೇಶಕರ ಮುಖಾಂತರ.
4. ಕಛೇರಿ/ಹೆಚ್ಚುವರಿ ಪ್ರತಿ.
5. ಸಹಾಯಕ ನಿರ್ದೇಶಕರು, ಇ-ಆಡಳಿತ, ಪ.ಪೂ.ಶಿ.ಇಲಾಖೆ ಬೆಂಗಳೂರು-ಇವರಿಗೆ ಅಂತರ್ಜಾಲದಲ್ಲಿ ಅಳವಡಿಸಲು.